# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

14

ಇಲಾಖೆ / ವಿಷಯ : DEPARTMENT / SUBJECT: ಸಂಸತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ

ದಿನಾಂಕ : DATE : 11/1/21

## 29ರಿಂದ 2 ಹಂತದಲ್ಲಿ ಕೇಂದ್ರ ಬಜೆಟ್ ಅಧಿವೇಶನ: ಜೋಶಿ



ಹುಬ್ಬಳ್ಳಿ: ಸಂಸತ್ತಿನ ಬಜೆಟ್ ಅಧಿವೇಶನ ಎರಡು ಹಂತದಲ್ಲಿ ನಡೆಸಲಾಗುತ್ತದೆ. ಜ.29ರಿಂದ ಫೆ.15ರವರೆಗೆ ಕೇಂದ್ರ ಆಯವ್ಯಯ ಮಂಡನೆ ಸೇರಿ ಮೊದಲ ಹಂತದ ಅಧಿವೇಶನ, ಮಾ.8ರಿಂದ ಏ.8ರವರೆಗೆ ಎರಡನೇ ಹಂತದ ಪ್ರಶ್ನೋತ್ತರ ವೇಳೆ ಸೇರಿದಂತೆ ಪೂರ್ಣ ಪ್ರಮಾಣದ ಅಧಿವೇಶನ ನಡೆಯಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ ಜೋಶಿ ತಿಳಿಸಿದರು. ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿವೇಶನ ಹಿನ್ನೆಲೆಯಲ್ಲಿ ಜ.30ರಂದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಸರ್ವಪಕ್ಷಗಳ ಸಭೆ ನಡೆಯಲಿದೆ. ವಿವಿಧ ವಿಷಯ-ಸಮಸ್ಯೆಗಳ ಕುರಿತಾಗಿ ಮಾತುಕತೆಗೆ ಕೇಂದ್ರ ಸರ್ಕಾರ ಮುಕ್ತ ಮನಸ್ಸು ಹೊಂದಿದೆ. ಸಮಸ್ಯೆಗಳ ಇತ್ಯರ್ಥಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ. ಫೆ.1ರಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2021-22ನೇ ಸಾಲಿನ ಕೇಂದ್ರ ಆಯವ್ಯಯ ಮಂಡಿಸಲಿದ್ದಾರೆ. ಸಂಸತ್ತಿನ ಎರಡನೇ ಹಂತದ ಬಜೆಟ್ ಅಧಿವೇಶನ ಮಾ.8ರಿಂದ ಏ.8ರವರೆಗೆ ನಡೆಯಲಿದೆ. ಪ್ರಶ್ನೋತ್ತರ ವೇಳೆ ಸೇರಿ ಪೂರ್ಣ ಪ್ರಮಾಣದ ಅಧಿವೇಶನ ನಡೆಸಲಾಗುತ್ತದೆ ಎಂದರು.